ಇ.ಎಸ್.ಐ. ಆಸ್ಪತ್ರೆಯಲ್ಲಿನ ಚಿಕಿತ್ಸೆ

933 (461); ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ)

ಅ) ರಾಜ್ಯದಲ್ಲಿ ಒಟ್ಟು ಕಾರ್ಮಿಕ ವಿಮಾ ಚೀಟಿದಾರರ ಸಂಖ್ಯೆ ಎಷ್ಟು; (ಇ.ಎಸ್.ಐ. ಕಾರ್ಡು ಹೊಂದಿರುವ ಕಾರ್ಮಿಕರು)

ಆ) ಕಾರ್ಮಿಕ ವಿಮಾ ಆಸ್ಪತ್ರೆಯಲ್ಲಿ (ಇ.ಎಸ್.ಐ.) ಉದ್ಯೋಗ ಮಾಡುತ್ತಿರುವ ವೈದ್ಯರ ಸಂಖ್ಯೆ ಎಷ್ಟು;

ಇ) ಈ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಸಂಖ್ಯೆ ಎಷ್ಟು;

ಈ) ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ದಾಖಲಾದ ರೋಗಿಗಳನ್ನು ಹೊರಗಿನ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಕಳುಹಿಸುತ್ತಿರುವುದರಿಂದ ರೋಗಿಗಳು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಹೊರಗಿನ ಆಸ್ಪತ್ರೆಗೆ ಚಿಕಿತ್ಸೆಗಾಗಿ ಕಳುಹಿಸಿರುವ ರೋಗಿಗಳ ಸಂಖ್ಯೆ ಎಷ್ಟು ಮತ್ತು ಅವರು ನೀಡಿರುವ ಚಿಕಿತ್ಸೆಗೆ ಇ.ಎಸ್.ಐ. ಆಸ್ಪತ್ರೆಯವರು ಪಾವತಿಸಿರುವ ಹಣದ ಮೊತ್ತವೆಷ್ಟು; (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

ಊ) ಇ.ಎಸ್.ಐ. ಆಸ್ಪತ್ರೆಯಲ್ಲಿ ಎಲ್ಲಾ ಖಾಯಿಲೆಗೆ ಸೂಕ್ತ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಋ) ಹಾಗಿದ್ದಲ್ಲಿ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ 21.45 ಲಕ್ಷ ವಿಮಾದಾರರಿರುತ್ತಾರೆ.

ಆ) ಇಲಾಖೆಯಲ್ಲಿ ಒಟ್ಟಾರೆ 384 ವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆಗಳಲ್ಲಿ ಒಟ್ಟಾರೆ 150 ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ.

ಇ) 2013–14ನೇ ಸಾಲಿಗೆ–

ಒಳರೋಗಿಗಳ ಸಂಖ್ಯೆ: 38,786

ಹೊರ ರೋಗಿಗಳ ಸಂಖ್ಯೆ: 6,99,519

ಈ) ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆಗಳಲ್ಲಿ ಲಭ್ಯವಿಲ್ಲದ ಸೌಲಭ್ಯಗಳಿಗೆ ಮಾತ್ರ ಹೆಚ್ಚಿನ ಚಿಕಿತ್ಸೆಗಾಗಿ ಹೊಂದಾಣಿಕೆ ಮಾಡಿಕೊಂಡ ಆಸ್ಪತ್ರೆಗಳಿಗೆ ವಿಮಾ ರೋಗಿಗಳನ್ನು ಕಳುಹಿಸಲಾಗುತ್ತಿದ್ದು, ನಗದು ರಹಿತ ವೈದ್ಯಕೀಯ ಸೌಲಭ್ಯ ವಿಸ್ತರಿಸಲಾಗುತ್ತಿದ್ದು, ಇದರಿಂದ ರೋಗಿಗಳಿಗೆ ತೊಂದರೆ ಉಂಟಾಗಿರುವುದಿಲ್ಲ.

ಉ)

ವರ್ಷ	ರೋಗಿಗಳ ಸಂಖ್ಯೆ	ಪಾವತಿಸಿರುವ ಹಣದ ಮೊತ್ತ
2011–12	42801	₹ 7130.80 ಲಕ್ಷ
2012–13	57200	₹ 9782.10 ಲಕ್ಷ
2013–14	49993	₹ 12793.01 ಲಕ್ಷ

ಊ) ಎಲ್ಲಾ ಖಾಯಿಲೆಗಳಿಗೆ ಇ.ಎಸ್.ಐ. ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಋ) ವಿಮಾರೋಗಿಗಳಿಗೆ ಕಾ.ರಾ.ವಿ. ಆಸ್ಪತ್ರೆಗಳಲ್ಲಿ ಲಭ್ಯವಿಲ್ಲದ ಸೌಲಭ್ಯವನ್ನು ವಿಸ್ತರಿಸಲು 85ಕ್ಕೂ ಹೆಚ್ಚು ಸುಸಜ್ಜಿತ ಆಸ್ಪತ್ರೆಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡು ಈ ಆಸ್ಪತ್ರೆಗಳ ಮುಖಾಂತರ ನಗದು ರಹಿತ ವೈದ್ಯಕೀಯ ಸೌಲಭ್ಯ ವಿಸ್ತರಿಸಲಾಗುತ್ತಿದ್ದು, ವಿಮಾರೋಗಿಗಳಿಗೆ ಯಾವುದೇ ಅನಾನುಕೂಲತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿರುತ್ತದೆ.